# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ ಇವರ ವಿರುದ್ಧದ ಲೋಕಾಯುಕ್ತ ಪ್ರಕರಣದ ಬಗ್ಗೆ.

**ಓದಲಾಗಿದೆ:**

1. ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂ: LOK: INV (G)/BD/CR-5/96/TKR, ದಿನಾಂಕ: 15-11-1996.
2. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 86 ಕೃಪವಿ 1996, ದಿನಾಂಕ: 21-11-1996.
3. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 86 ಕೃಪವಿ 1996, ದಿನಾಂಕ: 28-07-1997.
4. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 86 ಕೃಪವಿ 1996, ದಿನಾಂಕ: 19-01-2002.
5. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 86 ಕೃಪವಿ 1996, ದಿನಾಂಕ: 26-10-2002.
6. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 86 ಕೃಪವಿ 1996, ದಿನಾಂಕ: 03-03-2003.
7. ಲೋಕಾಯುಕ್ತ ವಿಶೇಷ ಪ್ರಕರಣ ಸಂಖ್ಯೆ: 28/2002ರಲ್ಲಿ ಜಿಲ್ಲಾ ಮತ್ತು ಸೆಶನ್ಸ್ ನ್ಯಾಯಾಲಯ, ತುಮಕೂರು, ನೀಡಿರುವ ದಿನಾಂಕ: 15-03-2012ರ ತೀರ್ಪು.
8. ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ, ತುಮಕೂರು ಜಿಲ್ಲೆ ಇವರ ಮನವಿ ದಿನಾಂಕ: 31-07-2012.

******

**ಪ್ರಸ್ತಾವನೆ:-**

ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ತಮ್ಮ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುತ್ತಾರೆಂದು, ಲೋಕಾಯುಕ್ತ ಅಧಿಕಾರಿಗಳು ಅವರ ನಿವಾಸದ ಮೇಲೆ ದಾಳಿನಡೆಸಿ ನೀಡಿದ ವರದಿಯಲ್ಲಿ ಆರೋಪಗಳು ಮೇಲ್ನೋಟಕ್ಕೆ ಸರಿಯೆಂದು ಕಂಡು ಬಂದ ಪ್ರಯುಕ್ತ ಸದರಿ ಅಧಿಕಾರಿಯವರನ್ನು ಅಮಾನತ್ತಿನಲ್ಲಿರಿಸುವಂತೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಪತ್ರದಲ್ಲಿ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಕೋರಿರುವ ಪ್ರಯುಕ್ತ, ಸದರಿಯವರ ಕೋರಿಕೆಯಂತೆ ಪರಿಶೀಲಿಸಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ ಅವರ ಮೇಲಿನ ಲೋಕಾಯುಕ್ತ ತನಿಖೆಯನ್ನು ಬಾಕಿಯಿಟ್ಟು ಅಮಾನತ್ತಿನಲ್ಲಿರಿಸಲಾಗಿತ್ತು. ನಂತರ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅವರನ್ನು ಅವರ ವಿರುದ್ಧದ ಲೋಕಾಯುಕ್ತ ತನಿಖೆಯನ್ನು ಬಾಕಿಯಿಟ್ಟು ಅಮಾನತ್ತನ್ನು ತೆರವುಗೊಳಿಸಿ ಸಹಾಯಕ ಕೃಷಿ ನಿರ್ದೇಶಕರು, (ಅಗ್ರಾನಮಿ) ಭೂಸಾರ ಸಂರಕ್ಷಣಾ ತರಬೇತಿ ಕೇಂದ್ರ, ಮೈಸೂರು, ಇಲ್ಲಿ ಖಾಲಿಯಿರುವ ಹುದ್ದೆಗೆ ನೇಮಿಸಲಾಗಿತ್ತು.

ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ, ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಅಭಿಯೋಜನೆಗೊಳಿಸಲು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ

ಅಭಿಯೋಜನಾ ಮಂಜೂರಾತಿಯನ್ನು ನೀಡಲಾಗಿತ್ತು. ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ, ಇವರ ಪ್ರಕರಣವು ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿರುವುದರಿಂದ ಇವರನ್ನು ಸೇವೆಯಲ್ಲಿ ಮುಂದುವರೆಸುವುದು ಸಮಂಜಸವಲ್ಲವೆಂದು ತೀರ್ಮಾನಿಸಿ 2ನೇ ಬಾರಿಗೆ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು. ನಂತರ ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅವರನ್ನು ಅವರ ವಿರುದ್ದದ ಲೋಕಾಯುಕ್ತ ತನಿಖೆಯನ್ನು ಬಾಕಿಯಿಟ್ಟು ಅಮಾನತ್ತನ್ನು ತೆರವುಗೊಳಿಸಿ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಬಾಗಲಕೋಟೆ, ಇಲ್ಲಿಗೆ ನೇಮಿಸಲಾಯಿತ್ತು. ಮೇಲೆ ಕ್ರಮ ಸಂಖ್ಯೆ (7)ರಲ್ಲಿ ಓದಲಾದ ಅಪರ ಜಿಲ್ಲಾ ಮತ್ತು ಸೆಶನ್ಸ್ ನ್ಯಾಯಾಲಯ, ತುಮಕೂರು, ಇವರು ಲೋಕಾಯುಕ್ತ ಮೊಕದ್ದಮೆ Spl. Case No. 28/2002 ರಲ್ಲಿ ದಿನಾಂಕ: 15-03-2012ರಂದು ನೀಡಿರುವ ತೀರ್ಪು ಈ ಕೆಳಕಂಡಂತಿರುತ್ತದೆ.

> "Acting under section 235(1) of Cr.P.C, The accused is acquitted of the charge brought against him. The bail bond of accused and his surety stands discharged."

ಮೇಲೆ (8)ರಲ್ಲಿ ಓದಲಾದ ಶ್ರೀ ಆರ್.ಪಿ ರಾಮಯ್ಯ, ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ಲೋಕಾಯುಕ್ತ ಪ್ರಕರಣದಲ್ಲಿ ನ್ಯಾಯಾಲಯವು ದೋಷಮುಕ್ತವೆಂದು ತೀರ್ಪು ನೀಡಿರುವುದರಿಂದ ತಮ್ಮ ದಿನಾಂಕ: 21-11-1996 ರಿಂದ 28-07-1997 ರವರೆಗೆ ಮತ್ತು ದಿನಾಂಕ: 26-10-2002 ರಿಂದ 03-03-2003 ರವರೆಗಿನ ನಿಲಂಬನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಹಾಗೂ 1996 ರಿಂದ ನಿಲಂಬನೆ ಕಾರಣದಿಂದ ತಡೆಹಿಡಿಯಲಾಗಿದ್ದ ವಾರ್ಷಿಕ ವೇತನ ಬಡ್ತಿ/ವೇತನ ನಿಗಧಿಗಳನ್ನು ಪರಿಷ್ಕರಿಸಿ ಪಾವತಿಸುವಂತೆ ಮಹಾಲೇಖಪಾಲರಿಗೆ ತಿಳಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಹಿನ್ನೆಲೆಯಲ್ಲಿ ಪರಿಶೀಲಿಸಿದ ಸರ್ಕಾರವು ನ್ಯಾಯಾಲಯದ ದಿನಾಂಕ: 15-03-2012ರ ತೀರ್ಪಿನಂತೆ ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ್ಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ ಇವರನ್ನು ಈ ಪ್ರಕರಣದಲ್ಲಿ ಅಮಾನತ್ತಿನಲ್ಲಿರಿಸಿದ ಅವಧಿಯನ್ನು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿ ನಿಯಮ 100(3) ರಂತೆ ಕರ್ತವ್ಯದ ಅವಧಿಯೆಂದು ಪರಿಗಣಿಸಲು ಮತ್ತು ಈ ಪ್ರಕರಣದ ನಿಮಿತ್ತ 1996 ರಿಂದ ನಿಲಂಬನೆ ಕಾರಣದಿಂದ ತಡೆಹಿಡಿಯಲಾಗಿದ್ದ ವಾರ್ಷಿಕ ವೇತನ ಬಡ್ತಿ/ವೇತನ ನಿಗಧಿಗಳನ್ನು ಬಿಡುಗಡೆ ಮಾಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 86 ಕೃಪವಿ 1996**
**ಬೆಂಗಳೂರು, ದಿನಾಂಕ: 01-01-2013.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಆರ್.ಪಿ. ರಾಮಯ್ಯ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಪಾವಗಡ ತುಮಕೂರು ಜಿಲ್ಲೆ ಇವರ ವಿರುದ್ದದ ಲೋಕಾಯುಕ್ತ ಪ್ರಕರಣದಲ್ಲಿ ನ್ಯಾಯಾಲಯವು ಅವರನ್ನು ಆರೋಪಮುಕ್ತರನ್ನಾಗಿ ಮಾಡಿರುವ ತೀರ್ಪಿನಂತೆ ದಿನಾಂಕ: 21-11-1996 ರಿಂದ 28-07-1997 ರವರೆಗೆ ಮತ್ತು ದಿನಾಂಕ: 26-10-2002 ರಿಂದ 03-03-2003 ರವರೆಗಿನ ನಿಲಂಬನ ಅವಧಿಯನ್ನು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿ ನಿಯಮ 100(3)ರ ಪ್ರಕಾರ ಕರ್ತವ್ಯದ ಅವಧಿಯೆಂದು ಪರಿಗಣಿಸಲು ಹಾಗೂ 1996 ರಿಂದ ನಿಲಂಬನೆ ಕಾರಣದಿಂದ ತಡೆಹಿಡಿಯಲಾಗಿದ್ದ ವಾರ್ಷಿಕ ವೇತನ ಬಡ್ತಿ/ವೇತನ ನಿಗಧಿಗಳನ್ನು ಬಿಡುಗಡೆ ಮಾಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

**ಇವರಿಗೆ:**

1. ಅಕೌಂಟ್ಸ್ ಆಫೀಸರ್, ಜಿಇ-5, ಮಹಾಲೇಖಪಾಲರ ಕಛೇರಿ, ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3. ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಅಂಬೇಡ್ಕರ್ ವೀದಿ, ಬೆಂಗಳೂರು-01.
4. ಜಂಟಿ ಕೃಷಿ ನಿರ್ದೇಶಕರು, ತುಮಕೂರು.
5. ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ತುಮಕೂರು, ಬೆಳಗಾವಿ.
6. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸಂಬಂಧಪಟ್ಟ ಅಧಿಕಾರಿಗೆ (ಆಯುಕ್ತರು, ಕೃಷಿ ಇಲಾಖೆ, ಇವರ ಮುಖಾಂತರ).
9. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.